# ಕಾಂಗ್ರೆಸ್ ಪಕ್ಷ ಕೊಟ್ಟ ಮಾತು ಈಡೇರಿಸಿ ಜನರ ವಿಶ್ವಾಸ ಉಳಿಸಿಕೊಂಡಿದೆ : ಲಕ್ಷ್ಮೀ ಹೆಬ್ಬಾಳಕರ್



ರಾಮದುರ್ಗ: ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಕೊಟ್ಟ ಮಾತು ಉಳಿಸಿಕೊಂಡು ರಾಷ್ಟ್ರ ಮತ್ತು ಜನ ಸೇವೆ ಮಾಡುತ್ತ ಬಂದಿದೆ. ಹಾಗಾಗಿ ಜನರು ಕಾಂಗ್ರೆಸ್ ಮೇಲೆ ವಿಶ್ವಾಸವಿಟ್ಟಿದ್ದಾರೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನು ಅತ್ಯಧಿಕ ಮತಗಳ ಅಂತರದಿಂದ ಗೆಲ್ಲಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮನವಿ ಮಾಡಿದ್ದಾರೆ.

ರಾಮದುರ್ಗ ವಿಧಾನಸಭಾ ಕ್ಷೇತ್ರದ ಬನ್ನೂರ್ ತಾಂಡಾ ಸಮುದಾಯ ಭವನ ಹತ್ತಿರ ನಡೆದ ತಾಲೂಕಾ ಬಂಜಾರ ಸಮುದಾಯದ (ತಾಂಡಾಗಳ) ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬೆಳಗಾವಿ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ಬೆಂಬಲ ನೀಡುವ ಮೂಲಕ ಹರಸಿ, ಆಶೀರ್ವದಿಸಿರಿ ಎಂದು ಬಂಜಾರ ಸಮುದಾಯದ ಜನರಲ್ಲಿ ಸಚಿವರು ವಿನಂತಿಸಿದರು.

ರಾಜ್ಯ ಸರ್ಕಾರದಿಂದ ಅನುಷ್ಠಾನಗೊಂಡಿರುವ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಬಂಜಾರಾ ಸಮಾಜದವರು ಸಂತಸಗೊಂಡಿದ್ದಾರೆ. ಜತೆಗೆ ನೆಮ್ಮದಿಯ ಜೀವನವನ್ನು ನಡೆಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಬಡವರ, ಶ್ರಮಿಕರ, ರೈತರ ಪಕ್ಷವಾಗಿ ಗುರುತಿಸಿಕೊಂಡಿದೆ. ಮಹಿಳೆಯರ ಸ್ವಾವಲಂಬನೆಗೆ ಆದ್ಯತೆ ನೀಡಿ ಕೆಲಸ ಮಾಡುತ್ತಿದೆ. ಚುನಾವಣೆಯ ಸಮಯದಲ್ಲಿ ಎಲ್ಲಿಂದಲೋ ಬಂದು ಕರ್ಮಭೂಮಿ ಎನ್ನುವವರನ್ನು, ಯಾರನ್ನೋ ನೋಡಿ ಮತ ಕೊಡಿ ಎನ್ನುವವರನ್ನು ಜನರು ನಂಬಲು ಸಾಧ್ಯವಿಲ್ಲ. ಜನರ ಸ್ವಾಭಿಮಾನಕ್ಕಿಂತ ದೊಡ್ಡದು ಯಾವುದೂ ಇಲ್ಲ. ಹಾಗಾಗಿ ಎಲ್ಲ ವರ್ಗದ ಜನರು, ಮಹಿಳೆಯರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಲು ನಿರ್ಧರಿಸಿದ್ದಾರೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ನರೇಗಾ ಯೋಜನೆ ತಂದಿದ್ದು ಕಾಂಗ್ರೆಸ್ ಪಕ್ಷ. ಅನ್ನ ಭಾಗ್ಯ ತಂದಿದ್ದು ಕಾಂಗ್ರೆಸ್ ಪಕ್ಷ. ಬಡವರಿಗಾಗಿನ ಎಲ್ಲ ಯೋಜನೆಗಳನ್ನು ರೂಪಿಸಿದ್ದು ಕಾಂಗ್ರೆಸ್ ಪಕ್ಷ. ಕೇವಲ ಯೋಜನೆ ಘೋಷಣೆಯಷ್ಟೇ ಅಲ್ಲ, ಅವುಗಳನ್ನು ಸಮರ್ಪಕವಾಗಿ ಜಾರಿಗೊಳಿಸುವ ಬದ್ಧತೆಯನ್ನೂ ಕಾಂಗ್ರೆಸ್ ಹೊಂದಿದೆ. ಕೊಟ್ಟ ವಚನದಿಂದ ಎಂದಿಗೂ ಹಿಂದೆ ಸರಿಯುವುದಿಲ್ಲ. ಹಾಗಾಗಿ ಪಕ್ಷ ಬೇಧ, ಜಾತಿ ಬೇಧ ಮರೆತು ಎಲ್ಲರೂ ಈ ಬಾರಿ ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸಬೇಕು ಎಂದು ಸಚಿವರು ಕೋರಿದರು.

ಬಂಜಾರಾ ಸಮಾಜದವರ ವೇಷಭೂಷಣ, ಸಂಸ್ಕೃತಿ, ಉಡುಪುಗಳನ್ನು ತೊಟ್ಟು ಸಂಭ್ರಮಿಸಿದ ಸಚಿವರು, ಬಂಜಾರಾ ಸಮಾಜದ ಕುಲ ಗುರುಗಳಿಗೆ ಗೌರವ ನಮನ ಸಲ್ಲಿಸಿದರು. ಕಳೆದ ಚುನಾವಣೆಯಲ್ಲಿ ಬಂಜಾರ ಸಮುದಾಯ ಸಂಪೂರ್ಣ ಕಾಂಗ್ರೆಸ್ ಬೆಂಬಲಿಸಿದೆ. ಇದರಿಂದ ನಮಗೆ ಸಾಕಷ್ಟು ಅನುಕೂಲವಾಗಿದೆ. ಹಾಗಾಗಿ ಈ ಚುನಾವಣೆಯಲ್ಲಿ ಸಹ ನಾವು ಕಾಂಗ್ರೆಸ್ ಬೆಂಬಲಿಸುತ್ತೇವೆ. ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡುತ್ತೇವೆ ಎಂದು ಬಂಜಾರ ಸಮುದಾಯದವರು ಭರವಸೆ ನೀಡಿದರು.

ಈ ಸಮಯದಲ್ಲಿ ಮುಖಂಡರಾದ ಪ್ರದೀಪ ಪಟ್ಟಣ, ಪರ್ವತಗೌಡ, ಗ್ರಾಮ ಪಂಚಾಯತ್ ಅಧ್ಯಕ್ಷೆ ಈರವ್ವ ಲಮಾಣಿ, ಶೇಖರ್ ಸಿದ್ದಲಿಂಗಪ್ಪನವರ, ಜಿ.ಬಿ.ರಂಗನ್ನಗೌಡ, ಜಹುರ್ ಹಾಜಿ, ಪರುಶರಾಮ ಪಮ್ಮಾರ, ತಾರಾಸಿಂಗ್ ರಾಥೋಡ್, ಲಕ್ಷ್ಮಣ ರಾಥೋಡ್, ಕುಮಾರ ರಾಥೋಡ್, ಸೋಮು ಲಮಾಣಿ, ಸುಭಾಷ್ ಪಮ್ಮಾರ್, ಫಕೀರಪ್ಪ ಜಂಗವಾಡ್, ಜೀವಲಪ್ಪ ಲಮಾಣಿ, ಶಿವಪ್ಪ ಪೂಜೇರಿ, ನೀಲಪ್ಪ ದಾಡಿಬಾಂವಿ, ಕೃಷ್ಣ ಲಮಾಣಿ, ರಮೇಶ್ ಲಮಾಣಿ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಂಡ್ಯಪ್ಪ ಕಾಶ್ಯಂಪೂರ್ ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಟೀಕಾ ಪ್ರಹಾರ




ಬೆಳಗಾವಿ: ಕರ್ನಾಟಕ ರಾಜಕೀಯದ ಪ್ರಮುಖ ವ್ಯಕ್ತಿ ಬಂಡ್ಯಪ್ಪ ಕಾಶ್ಯಂಪೂರ್ ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಟೀಕೆಗಳನ್ನು ವ್ಯಕ್ತಪಡಿಸಿದ್ದಾರೆ ಮತ್ತು ಪ್ರಸ್ತುತ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ.

ಕಾಶ್ಯಂಪುರ್ ಅವರು ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಎತ್ತಿ ತೋರಿಸಿದರು, ಪ್ರತಿ ನಾಗರಿಕರಿಗೆ 10 ಕೆಜಿ ಅಕ್ಕಿ ನೀಡುವಂತಹ ಈಡೇರಿಸದ ಭರವಸೆಗಳನ್ನು ಉಲ್ಲೇಖಿಸಿ, ಮೋದಿ ಸರ್ಕಾರ ವಿತರಿಸಿದ 5 ಕೆಜಿ ಅಕ್ಕಿಗೆ ವ್ಯತಿರಿಕ್ತವಾಗಿದೆ. ಉಚಿತ ವಿದ್ಯುತ್ ನೀಡುವ ಗುರಿಯನ್ನು ಹೊಂದಿರುವ ಗೃಹಜ್ಯೋತಿ ಯೋಜನೆಯ ವೈಫಲ್ಯವನ್ನು ಟೀಕಿಸಿದ ಅವರು, ವಿಶೇಷವಾಗಿ ಮುಂಬರುವ ಲೋಕಸಭೆ ಚುನಾವಣೆಯ ಬೆಳಕಿನಲ್ಲಿ ಕಾಂಗ್ರೆಸ್ ಖಾಲಿ ಭರವಸೆಗಳನ್ನು ನೀಡಿದೆ ಎಂದು ಪ್ರತಿಪಾದಿಸಿದರು. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಪ್ರಭಾವವನ್ನು ಒತ್ತಿಹೇಳಿದ ಕಾಶ್ಯಂಪೂರ್, ಜೆಡಿಎಸ್ ಸರ್ಕಾರ ರೈತರ ಸಾಲ ಮನ್ನಾವನ್ನು ಶ್ಲಾಘಿಸಿದರು, ಕಾಂಗ್ರೆಸ್ ಉಪಕ್ರಮವನ್ನು ರಾಜಕೀಯಗೊಳಿಸುತ್ತಿದೆ ಎಂದು ಆರೋಪಿಸಿದರು. ಕರ್ನಾಟಕದ ಜನತೆಯ ಭಾವನೆಯನ್ನು ಎತ್ತಿ ಹಿಡಿದ ಅವರು, ಚುನಾವಣಾ ಫಲಿತಾಂಶದ ಮೂಲಕ ಕಾಂಗ್ರೆಸ್‌ನ ಲೋಪದೋಷಗಳಿಗೆ ಉತ್ತರ ನೀಡಲಿದ್ದಾರೆ ಎಂದು ಹೇಳಿದರು. ಇದಲ್ಲದೆ, ಕಾಶ್ಯಂಪುರ್ ಅವರು ಪ್ರಧಾನ ಮೋದಿಗೆ ವ್ಯಾಪಕವಾದ ಬೆಂಬಲವನ್ನು ಎತ್ತಿ ತೋರಿಸಿದರು, ಪ್ರತಿ ಹಳ್ಳಿಯಲ್ಲಿ ಅವರ ಜನಪ್ರಿಯತೆಯನ್ನು ಗಮನಿಸಿ ಮತ್ತು ರಾಷ್ಟ್ರದ ಮೂಲಸೌಕರ್ಯ ಅಭಿವೃದ್ಧಿಗೆ ಮೋದಿಯವರ ಗೆಲುವು ನಿರ್ಣಾಯಕವಾಗಿದೆ ಎಂದು ಪ್ರತಿಪಾದಿಸಿದರು.

ಬೆಳಗಾವಿಯಲ್ಲಿ ಬಿಜೆಪಿ ಅಭ್ಯರ್ಥಿ ಶೆಟ್ಟರ್ ಅವರನ್ನು ಬೆಂಬಲಿಸುವಂತೆ ಮತದಾರರನ್ನು ಕೋರಿದ ಕಾಶ್ಯಂಪುರ್, ದೇಶದ ಪ್ರಗತಿ ಮತ್ತು ಅಭಿವೃದ್ಧಿಗೆ ಅವರ ಗೆಲುವಿನ ಪ್ರಾಮುಖ್ಯತೆಯನ್ನು ಒತ್ತಿಹೇಳುವ ಮೂಲಕ ಮೋದಿಯನ್ನು ಪ್ರಧಾನಿಯಾಗಿ ಬೆಂಬಲಿಸುವುದಾಗಿ ಪುನರುಚ್ಚರಿಸಿದರು.

# ಮನೆ ಮಗ ಮೃಣಾಲ ಹೆಬ್ಬಾಳಕರ್‌ಗೆ ಆರತಿ ಬೆಳಗಿ, ತಿಲಕವಿಟ್ಟು ಹಾರೈಸಿದ ಬೆಳಗಾವಿ ಮಹಿಳೆಯರು



ಬೆಳಗಾವಿ: ಲೋಕಸಭಾ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಗುರುವಾರ ಸಂಜೆ ಬೆಳಗಾವಿ ನಗರದ ವಿವಿಧ ಭಾಗಗಳಲ್ಲಿ ಮತಯಾಚನೆ ನಡೆಸಿದರು. ಹೊದಲ್ಲೆಲ್ಲ ಮಹಿಳೆಯರು ಮನೆ ಮಗನಿಗೆ ಆರತಿ ಬೆಳಗಿ, ತಿಲಕವಿಟ್ಟು ವಿಜಯೀಭವ ಎಂದು ಹಾರೈಸಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಶಿವಾಜಿ ರೋಡ್, ಮುಜಾವರ್ ಗಲ್ಲಿ, ಪಾಟೀಲ ಮಾಳ, ಭಾಂದೂರ್ ಗಲ್ಲಿ, ತಹಶಿಲ್ದಾರ ಗಲ್ಲಿ, ಫುಲಬಾಗ್ ಗಲ್ಲಿ, ಪಾಟೀಲ ಗಲ್ಲಿ, ಮಠ್ ಗಲ್ಲಿ ಹಾಗೂ ಭಾತ್ಕಂಡೆ ಗಲ್ಲಿಗಳಲ್ಲಿ ಮೃಣಾಲ ಹೆಬ್ಬಾಳಕರ್ ಹಾಗೂ ದೊಡ್ಡ ಪ್ರಮಾಣದಲ್ಲಿ ಯುವಕರ ತಂಡ ಪ್ರಚಾರ ಕೈಗೊಂಡು, ಮತ ಯಾಚಿಸಿದರು. ಎಲ್ಲ ಕಡೆ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದರು. ಬರಗಾಲದ ಪರಿಸ್ಥಿತಿಯಲ್ಲಿ ಅನುಷ್ಠಾನಗೊಂಡಿರುವ, ಶಕ್ತಿ, ಗೃಹಲಕ್ಷ್ಮೀ, ಗೃಹಜ್ಯೋತಿಯಂತಹ ಗ್ಯಾರಂಟಿ ಯೋಜನೆಗಳು ಜನ ಸಾಮಾನ್ಯರಿಗೆ ವರದಾನವಾಗಿವೆ ಎನ್ನುತ್ತಿದ್ದರು. ಜೊತೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಸಾಧನೆಗಳ ಕುರಿತು ಜನರು ಹಾಡಿಹೊಗಳುತ್ತಿದ್ದರು. ಬೆಳಗಾವಿ ಗ್ರಾಮೀಣ ಕ್ಷೇತ್ರದಂತೆಯೇ ಎಲ್ಲ ಕಡೆ ಅಭಿವೃದ್ಧಿ ಕೆಲಸಗಳಾಗಬೇಕು ಎಂದು ಜನರು ಬಯಸುತ್ತಿದ್ದರು. ಈ ಬಾರಿ ಖಂಡಿತ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಬಹುಮತದಿಂದ ಆಯ್ಕೆಯಾಗಲಿದ್ದಾರೆ ಎಂದು ಜನರು ವಿಶ್ವಾಸ ತುಂಬುತ್ತಿದ್ದರು. 'ಸ್ಥಳೀಯ ಅಭ್ಯರ್ಥಿ ಬಿಟ್ಟು ಬೇರೆಯವರಿಗೆ ಮತ ನೀಡಲು ನಮ್ಮ ಮನಸ್ಸು ಒಪ್ಪುವುದಿಲ್ಲ. ಪ್ರತಿಯೊಬ್ಬರಿಗೂ ಸ್ವಾಭಿಮಾನ ಮುಖ್ಯ. ನಾವು ನಮ್ಮೂರ ಅಭ್ಯರ್ಥಿಯನ್ನೇ ಬೆಂಬಲಿಸುತ್ತೇವೆ ಎಂದು ಜನರು ಹೇಳುತ್ತಿದ್ದಾರೆ. ಇದರಿಂದಾಗಿ ನನ್ನ ಉತ್ಸಾಹ, ವಿಶ್ವಾಸ ಇಮ್ಮಡಿಯಾಗಿದೆ ಎಂದು ಮೃಣಾಲ ಪ್ರತಿಕ್ರಿಯಿಸಿದರು. ಪ್ರಚಾರದಲ್ಲಿ ಆಯಾ ಗಲ್ಲಿಗಳ ನಿವಾಸಿಗಳು, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ: ಅಭ್ಯರ್ಥಿಗಳ ಖರ್ಚು–ವೆಚ್ಚ, ಲೆಕ್ಕಪತ್ರಗಳ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ.ಏ.25: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು–ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕಾಗಿರುತ್ತದೆ. 01–ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಚುನಾವಣಾಧಿಕಾರಿಗಳ ಕಾರ್ಯಾಲಯ, ಬಸವ ಸರ್ಕಲ್, ತಾಲೂಕು ಆಡಳಿತ ಸೌಧ, ಚಿಕ್ಕೋಡಿ ಇಲ್ಲಿ ಏ.26 ಶುಕ್ರವಾರ ದಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಲೆಕ್ಕಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಮೃತ ವಾರಸುದಾರರ ಪತ್ತೆಗಾಗಿ

ಬಳ್ಳಾರಿ,ಏ.26: ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಹೊಸಪೇಟೆ ರೈಲ್ವೇ ನಿಲ್ದಾಣದಲ್ಲಿನ ವಾಟರ್ ಕೂಲರ್ ಹತ್ತಿರದ ವೇದಿಕೆ ನಂ.01 ರಲ್ಲಿ ರೈಲ್ವೇ ಕಿ.ಮೀ ನಂ.143/300–400 ರಲ್ಲಿ ಏ.25 ರಂದು ಸುಮಾರು 70 ವರ್ಷದ ವೃದ್ಧನು ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಉಪ–ನಿರೀಕ್ಷಕರು ತಿಳಿಸಿದ್ದಾರೆ.

ಚಹರೆ ಗುರುತು: ಸುಮಾರು 5.4 ಅಡಿ ಎತ್ತರ, ಚೌಕ ಮುಖ, ಬಡಕಲು ದೇಹ, ಗೋಧಿ ಮೈಬಣ್ಣ, ಉದ್ದ ಮೂಗು, ತಲೆಯಲ್ಲಿ ಸುಮಾರು 01 ಇಂಚು ಕಪ್ಪು ಮತ್ತು ಬಿಳಿ ಮಿಶ್ರಿತ ಕೂದಲು ಮತ್ತು ಕಪ್ಪು, ಬಿಳಿ ಮೀಸೆ ಮತ್ತು ಗಡ್ಡ ಹೊಂದಿರುತ್ತಾನೆ.ಮೃತನ ಮೈಮೇಲಿನ ಬಟ್ಟೆಗಳು: ಬಿಳಿ ಬಣ್ಣದ ಕೆಂಪು ಗೆರೆಯುಳ್ಳ ತುಂಬು ತೋಳಿನ ಚೆಕ್ಸ್ ಅಂಗಿ, ನೀಲಿ ಮತ್ತು ಕಪ್ಪು ಬಣ್ಣದ ಬಿಳಿ ಗೆರೆಯುಳ್ಳ ಚೆಕ್ಸ್ ಲುಂಗಿ, ಕೆಂಪು ಬಣ್ಣದ ಉಡದಾರ ಮತ್ತು ಕಂದು ಬಣ್ಣದ ಒಳುಡುಪು ಧರಿಸಿರುತ್ತಾನೆ.ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕರ ಮೊ.9480802131 ಮತ್ತು ರಾಯಚೂರು ರೈಲ್ವೇ ಪೊಲೀಸ್ ವೃತ್ತ ಪೊಲೀಸ್ ವೃತ್ತ ನಿರೀಕ್ಷಕರ ಮೊ.9480800471 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ 28 ರಂದು ಪ್ರಜಾಧ್ವನಿ ಕಾರ್ಯಕ್ರಮ



ಯರಗಟ್ಟಿ: ಪಟ್ಟಣದ ಬಸವೇಶ್ವರ ಪ್ರೌಢ ಶಾಲಾ ಆವರಣದಲ್ಲಿ 28ರಂದು ನೆಯುವ ಪ್ರಜಾಧ್ವನಿ ಕಾರ್ಯಕ್ರಮ ಸ್ಥಳ ಪರಿಶೀಲಿಸಿದ ಶಾಸಕ ವಿಶ್ವಾಸ ವೈದ್ಯ.

ಪಟ್ಟಣಕ್ಕೆ ಮುಖ್ಯ ಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಅನೇಕ ಶಾಸಕರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿಶಾಸಕ ವಿಶ್ವಾಸ ವೈದ್ಯ ಹಾಗೂ ಅಧಿಕಾರಿಗಳು ಹೆಲಿಪ್ಯಾಡ್, ಕಾರ್ಯಕ್ರಮ ನಡೆಯುವ ಸ್ಥಳ ಪರಿಶೀಲನೆ ನಡೆಸಿದರು. ಈ ವೇಳೆ ಪ್ರಕಾಶ ವಾಲಿ, ನಿಖೀಲ ಪಾಟೀಲ, ಗೋಪಾಲ ದಳವಾಯಿ, ಪ್ರವೀಣ ರಾಮಪ್ಪನವರ ಸೇರಿದಂತೆ ಇತರರಿದ್ದರು.

# ಪೋಲಾಗುತ್ತಿದ್ದ 5 ಎಂ.ಎಲ್.ಡಿ ನೀರನ್ನು ಮರು ಬಳಕೆ



ಬೆಳಗಾವಿ.ಏ.26–: ಬೆಳಗಾವಿ ನಗರದ ಲಕ್ಷ್ಮಿ ಟೆಕ್ ನೀರು ಸಂಸ್ಕರಣಾ ಘಟಕದಿಂದ ಬ್ಯಾಕ್ ವಾಶ್ ಆದ ನೀರು ಪ್ರತಿ ದಿನ 5 ಎಂಎಲ್‌ಡಿ ಯಷ್ಟು ನೀರು ಹೊರಗಡೆ ಪೋಲಾಗುತ್ತಿತ್ತು.

ಆದರಿಂದ ನಗರದಲ್ಲಿ ಯಾವ ಭಾಗದಲ್ಲಿ ನೀರು ಪೋಲಾಗುತ್ತಿದೆ ಎಂಬುದನ್ನು ಕಂಡುಹಿಡಿಯಲು ಸಾಕಷ್ಟು ಸಮಯ ನಂತರ ನೀರು ಸಂಸ್ಕರಣಾ ಘಟಕದಲ್ಲಿಯೇ ಬಹುಪಾಲು ನೀರು ವ್ಯರ್ಥವಾಗುತ್ತಿರುವುದು ಕಂಡು ಬಂದಿತು.

ಸುಮಾರು 5 ಎಂ.ಎಲ್.ಡಿಯಷ್ಟು ನೀರು ಹರಿದು ಹೋಗಿದ ಕಾರಣ ಅಲ್ಲಿಯ ಕೆಲವರ ಮನೆಯಲ್ಲಿ ಸೀಪೇಜ್ ಆಗುವುದರಿಂದ ತೊಂದರೆಯಾಗುತ್ತಿದೆ ಎಂದು ದೂರು ಬಂದಾಗ ಆದರಿಂದ ಹೊಸದಾಗಿ ಲಕ್ಷ್ಮಿ ಟೆಕ್‌ದಲ್ಲಿ ಬ್ಯಾಕ್ ವಾಶ್ ಆದ ನೀರು ಬೇರೆ ಬೇರೆ ಮಾರ್ಗವಾಗಿ ಹೋಗುವುದು ತಡೆಗಟ್ಟಿ ಹೊಸ ಪೈಪ ಲೈನ್ ನಿರ್ಮಾಣ ಮಾಡಿ, ಚೇಂಬರ್‌ಗಳನ್ನು ಕಟ್ಟಿ, ಬ್ಯಾಕ್ ವಾಶ್ ಆದ ನೀರು ಮುರುಬಳಕೆಗಾಗಿ ಒಂದು ರಿಸೈಕ್ಲಿಂಗ್ ಟ್ಯಾಂಕ್‌ಗೆ ಬಂದು ಸೇರುವಂತೆ ಯೋಚಿಸಿ ವ್ಯವಸ್ಥೆಯನ್ನು ನಿರ್ಮಾಣ ಮಾಡಲಾಯಿತು.

40ಹೆಚ್. ಪಿ. ಪಂಪ ಮೋಟಾರನ್ನು ಅಳವಡಿಸಿ ಚಾಲನೆಗೊಳಿಸಿದಾಗ ಬ್ಯಾಕ್ ವಾಶ್ ಆದ ನೀರು ಪೋಲಾಗುವುದು ತಪ್ಪಿತ್ತು. ಆ ಬ್ಯಾಕ್ ವಾಶ್ ಆದ ನೀರನ್ನು ಮತ್ತೆ ಏರಿಯೇಟರ್‌ನಲ್ಲಿ ಬಿಟ್ಟು ವಿವಿದ ಹಂತಗಳಲ್ಲಿ ನೀರನ್ನು ಸಂಸ್ಕರಿಸಿ ಮರು ಬಳಕೆಗೆ ಶುದ್ಧಿಕರಿಸಿ ನಗರದ ಜಿ.ಎಲ್‌ಎಸ್‌ಆರ್ ಗಳಿಗೆ ಸರಬರಾಜು ಮಾಡಿ ನಗರದ ವಿವಿಧ ನೀರು ಮಾಡಿರುವುದರಿಂದ ಬೇಸಿಗೆ ಕಾಲದಲ್ಲಿ ನೀರು ಸಮರ್ಪಕವಾಗಿ ಸರಬರಾಜು ಮಾಡುಬಹುದಾಗಿದೆ ಎಂದು ಬೆಳಗಾವಿ ಕೆಯುಐಡಿಎಫ್‌ಸಿ, ಕುಸ್ಸೆಂಪ್ ಯೋ.ಅ.ಘ ಸಾರ್ವಜನಿಕ ಸಂಪರ್ಕ ಅಧಿಕಾರಿಗಳಾದ ಪ್ರಕಾಶ.ಸಿ.ಕೋಷ್ಠಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭರತೇಶ ಶಿಕ್ಷಣ ಸಂಸ್ಥೆಯ ಸಿಬ್ಬಂದಿಯೊಂದಿಗೆ ಚರ್ಚೆ ನಡೆಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿಯ ಭರತೇಶ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರೊಂದಿಗೆ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರು ಪ್ರಚಾರ ಸಭೆ ನಡೆಸಿ, ಮತಯಾಚನೆ ಮಾಡಿದರು.

ಶುಕ್ರವಾರ ಬೆಳಗಾವಿಯಲ್ಲಿರುವ ಭರತೇಶ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರೊಂದಿಗೆ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರು, ಪ್ರಚಾರ ನಡೆಸಿ, ಮಾತನಾಡಿದ ಅವರು, ನರೇಂದ್ರ ಮೋದಿಯವರನ್ನು ಮೂರನೆ ಬಾರಿಗೆ ಮತ್ತೆ ಪ್ರಧಾನಿಯನ್ನಾಗಿ ಮಾಡಬೇಕು. 2014 ರಲ್ಲಿ ಮೋದಿ ಅವರು ಪ್ರಧಾನ ಆದಾಗ ಭಾರತದ ಆಡಳಿತ ವ್ಯವಸ್ಥೆ ಭ್ರಷ್ಟಾಚಾರದಿಂದ ಕುಡಿತು ಅದರೆ ಮೊದಿಯವರು ಪ್ರಧಾನಿಯಾದ ಬಳಿಕ ಅವರು ಒಂದೆ ಒಂದು ಕಪ್ಪು ಚುಕ್ಕೆ ಇಲ್ಲದಂತೆ ಆಡಳಿತ ನಡೆಸಿದರು ಹಾಗಾಗಿ ಮೊದಿಯವರನ್ನು ಮತ್ತೊಮ್ಮೆ ಪ್ರಧಾನ ಮಾಡಲು ನನ್ನನ್ನು ಗೆಲ್ಲಿಸಿ, ಲೋಕಸಭೆಗೆ ಕಳುಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ವಿನೋಧ ದೊಡ್ಡಣ್ಣವರ, ಡಾ. ಸಾವಿತ್ರಿ ದೊಡ್ಡಣ್ಣವರ, ಶ್ರೀಕಾಂತ ಕಮಲೆಪುರ, ಚಂದು ಕಲ್ಲಮನ, ಅಶೋಕ ದನವಾಡೆ, ದೇವಿಂದ್ರ ದೇಸಾಯಿ ಹಾಗೂ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನನ್ನು ಆಶೀರ್ವದಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ಮೇ 7ರಂದು ನಡೆಯಲಿರುವ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನನ್ನು ಆಶೀರ್ವದಿಸಿ ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮತದಾರರಲ್ಲಿ ಮನವಿ ಮಾಡಿದರು.

ನಿಪ್ಪಾಣಿಯ ಕರದಗಾ, ಹಾಗೂ ಭೋಜ ಜಿಪಂ ವ್ಯಾಪ್ತಿಯಲ್ಲಿ ಹಮ್ಮಿಕೊಂಡ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷ 2013ರಲ್ಲಿ ಅಧಿಕಾರಕ್ಕೆ ಬರುವುದಕ್ಕಿಂತ ಮುಂಚೆ ಪ್ರಣಾಳಿಕೆಯಲ್ಲಿ 165 ಭರವಸೆಗಳನ್ನು ನೀಡಿತು 158 ಭರವಸೆಗಳನ್ನು ಈಡೇರಿಸಿದೆ. ಅನ್ನಭಾಗ್ಯ, ಕ್ಷೀರಭಾಗ್ಯ, ಶೂ ಭಾಗ್ಯ, ರೈತರ ಸಾಲ ಮನ್ನಾ, ಇಂದಿರಾ ಕ್ಯಾಂಟೀನ್ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಈಡೇರಿಸಿದೆ. ಅಲ್ಲದೇ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದೆ ಎಂದರು.

ಬಡವರ ಪರವಾದ ಕಾರ್ಯಕ್ರಮ ನೀಡುವುದು ಕಾಂಗ್ರೆಸ್ ಪಕ್ಷ ಮಾತ್ರ. ಇದನ್ನು ಮತದಾರರು ಬೆಂಬಲಿಸುವ ಮೂಲಕ ಪಕ್ಷ ಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು. ಇಂದಿರಾ ಗಾಂಧಿ ಅವರಿಂದ ಹಿಡಿದು ಸಿದ್ದರಾಮಯ್ಯವರೆಗೆ ಕಾಂಗ್ರೆಸ್ ಪಕ್ಷದ ಎಲ್ಲರೂ ಬಡವರ ಪರ ಕೆಲಸ ಮಾಡಿದ್ದಾರೆ. "ನಮ್ಮ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ. ಕೈ ಯೋಜನೆಯಿಂದ ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿಧ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ ಮತದಾರರು ಕ್ಷೇತ್ರದ ಅಭಿವೃದ್ಧಿಗೆ ನನಗೆ ಮತ ನೀಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಸಮಸ್ಯೆಗಳ ನಿವಾರಣೆಗೆ ನನಗೆ ಮತ ನೀಡಿ: ಈ ಭಾರಿ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ನನಗೆ ಬೆಂಬಲಿ ನೀಡಿ, ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿ ಅವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದ ಅವರು, ನಾನು ಕೇವಲ ನಮ್ಮ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ಪುತ್ರಿ ಅಲ್ಲ ನಮ್ಮ ನಿಪ್ಪಾಣಿ ಮತಕ್ಷೇತ್ರದ ಮನೆ ಮಗಳು. ಹೀಗಾಗಿ ಈ ಭಾರಿ ಸಮಸ್ಯೆಗಳ ನಿವಾರಣೆಗೆ ಹಾಗೂ ಕ್ಷೇತ್ರ ಅಭಿವೃದ್ಧಿ ಮಾಡಲು ನನಗೆ ವೋಟ ನೀಡಬೇಕು ಎಂದು ಮನವಿ ಮಾಡಿದರು.

ತಂದೆ ಸತೀಶ ಜಾರಕಿಹೊಳಿಯವರೇ ನನಗೆ ಆದರ್ಶ: ರಾಜಕಾರಣದ ಮೂಲಕ ಸಮಾಜ ಸೇವೆ ಮಾಡುವುದರ ಜೊತೆಗೆ ಶಿಕ್ಷಣ, ಕ್ರೀಡೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಾಧನೆಗೈಯಲು ಬಯಸುವ ಯುವಕರಿಗೆ ತಮ್ಮ ಫೌಂಡೇಷನ್ ಮೂಲಕ ಸಹಾಯ ಸಹಕಾರ ನೀಡುವ ನಮ್ಮ ತಂದೆ ಸತೀಶ ಜಾರಕಿಹೊಳಿ ಅವರು ನನಗೆ ಆದರ್ಶ. ಅವರ ದಾರಿಯಲ್ಲೇ ನಡೆದು ಮತಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ನಮ್ಮ ಮನೆಯ ಮಗಳಾದ ನನಗೂ ಸಹ ನಮ್ಮ ತಂದೆಯವರಿಗೆ ನೀಡಿದ ಬೆಂಬಲ, ಅಭಿಮಾನವನ್ನು ನೀಡಿ ಎಂದರು.

ಇದಕ್ಕೂ ಮೊದಲು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ, ಡಾ. ಬಿ.ಆರ್. ಅಂಬೇಡ್ಕರ್, ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆಗಳಿಗೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಮಾಲಾರ್ಪಣೆ ಮಾಡಿದರು. ನಂತರ ಕರದಗಾ ಹಾಗೂ ಭೋಜ ಜಿಪಂ ವ್ಯಾಪ್ತಿಯ ಗ್ರಾಮಗಳಿಗೆ ಆಗಮಿಸಿದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಗ್ರಾಮದ ಮಹಿಳೆಯರು ಆರತಿ ಬೆಳಗಿ ಹೂಮಾಲೆ ಹಾಕುವ ಮೂಲಕ ಅದ್ಧೂರಿ ಸ್ವಾಗತ ಕೋರಿದರು.

ಈ ವೇಳೆ ಮಾಜಿ ಶಾಸಕ ಕಾಕಾಸಾಹೇಬ್ ಪಾಟೀಲ, ಮಾಜಿ ಸಚಿವ ವೀರಕುಮಾರ ಪಾಟೀಲ, ಬೂಡಾ ಅಧ್ಯಕ್ಷ ಲಕ್ಷಣರಾವ್ ಚಿಂಗಳೆ, ಸಚೀನ ಕೇಸ್ತಿ, ಲಕ್ಷಣ ಇಂದಲಕರ, ಡಾ. ಮಾಣೆ, ಶಂಕರ ಪಾಟೀಲ, ಸುಪ್ರೀಯಾ ಪಾಟೀಲ, ಬಸವರಾಜ ಪಾಟೀಲ, ರಾಜು ವಡ್ಡರ, ಪಂಕಜ ಪಾಟೀಲ, ರಾಜೇಶ ಕದಂ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ವಿವಿಧ ಗ್ರಾಮದ ಮಹಿಳೆಯರು ಇದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26